**Akashvani : Bangalore**
**Regional Bulletin In Kannada**
**19.05.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ದೇಶದಲ್ಲಿ ಬೆಲೆ ಏರಿಕೆಯಿಂದ ಬಡವರು, ಮಧ್ಯಮ ವರ್ಗದವರ ಬದುಕು ದುಸ್ಥಿರ- ಮುಖ್ಯಮಂತ್ರಿ ಸಿದ್ದರಾಮಯ್ಯ ಕಳವಳ

೨. ದಸರಾ ಮಹೋತ್ಸವದಲ್ಲಿ ಕಂಜನ್ ಆನೆ ಬಳಸದಂತೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅಧಿಕಾರಿಗಳಿಗೆ ಸೂಚನೆ

೩. ರೈತರ ಆತ್ಮಹತ್ಯೆ ಪ್ರಕರಣಗಳನ್ನು ಮುಚ್ಚಿಟ್ಟ ರಾಜ್ಯ ಸರ್ಕಾರ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪ

೪. ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ಅಭಾವವಿಲ್ಲ; ತೈಲ ಉದ್ಯಮದ ರಾಜ್ಯ ಸಂಯೋಜಕ ಸಿದ್ದಾರ್ಥ್ ಅಗರ್ವಾಲ್ ಸ್ಪಷ್ಟನೆ

೫. ಮಲೆ ಮಹದೇಶ್ವರ ಬೆಟ್ಟದಲ್ಲಿ ಚಿರತೆ ದಾಳಿಗೆ ಬಾಲಕ ಸಾವಿನ ಪ್ರಕರಣ: ಲೋಕಾಯುಕ್ತರಿಂದ ಸ್ವಯಂ ಪ್ರೇರಿತ ಪ್ರಕಣ ದಾಖಲು

---

ಚುನಾವಣೆ ಪ್ರಣಾಳಿಕೆಯಲ್ಲಿನ ೫೮೦ ಭರವಸೆಗಳಲ್ಲಿ ೨೯೦ ಕ್ಕೂ ಹೆಚ್ಚು ಭರವಸೆ ಈಡೇರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ತುಮಕೂರಿನಲ್ಲಿ "ಮೂರು ವರ್ಷಗಳ ಸಾಧನಾ ಸಮರ್ಪಣಾ" ಸಮಾವೇಶ ಉದ್ಘಾಟಿಸಿ, "ನವ ಕರ್ನಾಟಕ" ಅಭಿವೃದ್ಧಿ ಮಾದರಿಯ ವಸ್ತು ಪ್ರದರ್ಶನ ಮತ್ತು ಜಿಲ್ಲೆಯಲ್ಲಿ ನಡೆದಿರುವ ೬೮೨ ಕೋಟಿ ರೂಪಾಯಿ ಮೊತ್ತದ ಬೃಹತ್ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು

ಮುಂಬರುವ ಎರಡು ವರ್ಷಗಳಲ್ಲಿ ಬಾಕಿ ಭರವಸೆಗಳನ್ನೂ ಈಡೇರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ನರೇಂದ್ರ ಮೋದಿ ಅವರು ಪ್ರಧಾನಿ, ಆದ ಬಳಿಕ ದೇಶದಲ್ಲಿ ಡೀಸೆಲ್, ಪೆಟ್ರೋಲ್, ಚಿನ್ನದ ಬೆಲೆ ಆಕಾಶಕ್ಕೆ ಏರಿದೆ. ಬಡವರು ಮತ್ತು ಮಧ್ಯಮ ವರ್ಗದವರ ಆದಾಯ ಮತ್ತು ಬದುಕು ನೆಲಕಚ್ಚಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಗೃಹ ಸಚಿವ ಜಿ.ಪರಮೇಶ್ವರ್ ನೇತೃತ್ವದಲ್ಲಿ, ಕಂದಾಯ ಸಚಿವ ಕೃಷ್ಣಬೈರೇಗೌಡ ಉಸ್ತುವಾರಿಯಲ್ಲಿ ನಡೆದ ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಂಪುಟದ ಎಲ್ಲಾ ಸಚಿವರು ಹಾಗೂ ಶಾಸಕರುಗಳು ಉಪಸ್ಥಿತರಿದ್ದರು.

---

ಕೊಡಗಿನ ದುಬಾರೆ ಆನೆ ಶಿಬಿರದಲ್ಲಿ ನಡೆದ ಕಾಳಗದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಮಾರ್ತಾಂಡ ಆನೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು ಅರಣ್ಯ, ಸಚಿವ ಈಶ್ವರ ಬಿ ಖಂಡ್ರೆ ಶೋಕ ವ್ಯಕ್ತಪಡಿಸಿದ್ದಾರೆ.

ಅನಿರೀಕ್ಷಿತವಾದ ಮತ್ತು ಊಹಿಸಲೂ ಆಗದ ಈ ದುರ್ಘಟನೆಯಲ್ಲಿ ಒಬ್ಬ ಪ್ರವಾಸಿ ಮಹಿಳೆ ಮತ್ತು ಒಂದು ಆನೆ ಮೃತಪಟ್ಟಿರುವುದು ಅತ್ಯಂತ ದುಃಖದ ಸಂಗತಿ ಎಂದು ತಿಳಿಸಿದ್ದಾರೆ.

ಹಾಸನ ಜಿಲ್ಲೆ ಯಸಳೂರಿನ ಬಳಿ ೨೦೧೮ರಲ್ಲಿ ಸೆರೆ ಹಿಡಿಯಲಾಗಿದ್ದ ೨೫ ವರ್ಷದ ಕಂಜನ್ ೩ ಬಾರಿ ದಸರಾ ಮಹೋತ್ಸವದಲ್ಲಿ ಭಾಗಿಯಾಗಿದ್ದ. ಇನ್ನು ಮುಂದೆ ದಸರಾ ಮಹೋತ್ಸವಕ್ಕೆ ಈ ಆನೆಯನ್ನು ಬಳಸದಂತೆ ಸೂಚಿಸಿರುವುದಾಗಿಯೂ ಸಚಿವರು ಸ್ಪಷ್ಟಪಡಿಸಿದ್ದಾರೆ.

---

ಕೊಡಗಿನ ದುಬಾರೆ ಆನೆ ಶಿಬಿರದಲ್ಲಿ ಆನೆಗಳ ನಡುವೆ ಘರ್ಷಣೆ ವೇಳೆ ಮಹಿಳಾ ಪ್ರವಾಸಿಯೊಬ್ಬರು ಸಾವನ್ನಪ್ಪಿರುವುದಕ್ಕೆ ಮಡಿಕೇರಿ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಸಂತಾಪ ವ್ಯಕ್ತಪಡಿಸಿದ್ದಾರೆ.

ಈ ಕುರಿತಂತೆ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಪ್ರವಾಸಿಗರು ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಮಡಿಕೇರಿ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಿದ್ದಾರೆ. ಘಟನೆಗೆ ನಿಖರವಾದ ಕಾರಣ ಮತ್ತು ಪ್ರವಾಸಿ ಮಾರ್ಗಸೂಚಿಗಳ ನಿರ್ವಹಣೆಯಲ್ಲಿ  ಯಾವುದಾದರೂ ಲೋಪವಾಗಿದಿಯೇ ಎಂಬುದರ ಕುರಿತು ಸಮಗ್ರ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪ್ರವಾಸಿಗರು ಪ್ರಾಣಿಗಳಿಂದ ಸುರಕ್ಷಿತ ಅಂತರವನ್ನು ಕಾಯ್ದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

---

ರಾಜ್ಯದಲ್ಲಿ ನಡೆಯುತ್ತಿರುವ ರೈತರ ಆತ್ಮಹತ್ಯೆ ಪ್ರಕರಣಗಳನ್ನು ಸರ್ಕಾರ ಮುಚ್ಚಿಟ್ಟಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ  ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಅಪರಾಧ ದಾಖಲೆ ಬ್ಯೂರೋ ವರದಿಯ ಪ್ರಕಾರ, ರಾಜ್ಯಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ೫ ಸಾವಿರದ ೩೯೪ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ಬಿಡದಿ ಟೌನ್‌ಶಿಪ್ ವಿಚಾರವಾಗಿ ಚರ್ಚೆಗೆ ಆಹ್ವಾನಿಸಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸವಾಲನ್ನು ಸ್ವೀಕರಿಸಿದ ಅವರು, ಚರ್ಚೆಗೆ ತಯಾರಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

ಶೀಘ್ರವೇ ಎರಡು ಬಾರಿ ಶಾಸಕರಾಗಿದ್ದ ಅಖಂಡ ಶ್ರೀನಿವಾಸ್ ಮೂರ್ತಿ ಜೆಡಿಎಸ್ ಸೇರ್ಪಡೆಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

---

ರಾಜ್ಯ ಸರ್ಕಾರ ಮೂರು ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ತುಮಕೂರಿನಲ್ಲಿ ನಡೆದ ಸಾಧನಾ ಸಮಾವೇಶದ ಬಗ್ಗೆ ಬಿಜೆಪಿ ಟೀಕಿಸಿದೆ.  ಯಾವ ಕಾರಣಕ್ಕಾಗಿ ಕಾಂಗ್ರೆಸ್ ಸಾಧನಾ ಸಮಾವೇಶ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಶ್ನಿಸಿದ್ದಾರೆ.  ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಜನರ ಸಂಕಷ್ಟಗಳಿಗೆ ಸ್ಪಂದಿಸದ ಕಾಂಗ್ರೆಸ್ ಸರ್ಕಾರ ಈಗ ಸಾಧನಾ ಸಮಾವೇಶ ಮಾಡುತ್ತಿದೆ ಎಂದು ದೂರಿದ್ದಾರೆ.

ರಾಜ್ಯದ ಜನರ ಬದುಕು ಅಭದ್ರತೆಯಿಂದ ಕೂಡಿದೆ. ಯಾವುದೇ ಅಭಿವೃದ್ಧಿ ಕಾರ್ಯಗಳು ಆಗಿಲ್ಲ. ರಸ್ತೆಗಳು ಸಂಪೂರ್ಣ ಹಾಳಾಗಿವೆ. ಗುಂಡಿಗಳನ್ನು ಮುಚ್ಚುವುದಕ್ಕೂ ಸರ್ಕಾರಕ್ಕೆ ಆಗುತ್ತಿಲ್ಲ. ಆಸ್ಪತ್ರೆ, ಶಾಲಾ-ಕಾಲೇಜುಗಳಿಗೆ ಸರ್ಕಾರ ಏನಾದರೂ ಆದ್ಯತೆ ನೀಡಿದೆಯೇ ಎಂದು ಪ್ರಶ್ನಿಸಿದ್ದಾರೆ.

---

ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ ಸಾರ್ವಜನಿಕ ವಲಯದ ತೈಲ ಕಂಪನಿಗಳಾದ ಇಂಡಿಯನ್ ಆಯಿಲ್, ಬಿಪಿಸಿಎಲ್ ಮತ್ತು ಎಚ್‌ಪಿಸಿಎಲ್ ರಾಜ್ಯದಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ದ್ರವೀಕೃತ ಪೆಟ್ರೋಲಿಯಂ ಗ್ಯಾಸ್ ನಿರಂತರ ಪೂರೈಕೆಯನ್ನು ಕಾಯ್ದುಕೊಂಡಿದೆ ಎಂದು ಕರ್ನಾಟಕದ ತೈಲ ಉದ್ಯಮದ ರಾಜ್ಯಮಟ್ಟದ ಸಂಯೋಜಕರಾದ ಸಿದ್ಧಾರ್ಥ್ ಅಗರ್ವಾಲ್ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಎಲ್ಲಾ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಇಂಧನ ವಿತರಣಾ ಕಾರ್ಯಾಚರಣೆಗಳು ಸುಗಮವಾಗಿ ಮುಂದುವರಿದಿದೆ. ನಿಗದಿತ ಸುರಕ್ಷತೆ ಮತ್ತು ಕಾರ್ಯಾಚರಣೆಯ ಮಾನದಂಡಗಳಿಗೆ ಅನುಗುಣವಾಗಿ ಯಾವುದೇ ನಿರ್ಬಂಧಗಳಿಲ್ಲದೆ, ಪೂರೈಕೆಯನ್ನು ನಿರ್ವಹಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಎಲ್‌ಪಿಜಿ ಪೂರೈಕೆಯನ್ನು ಸಹಜ ಸ್ಥಿತಿಯಲ್ಲಿ ಕಾಯ್ದುಕೊಳ್ಳಲಾಗಿದ್ದು, ರಾಜ್ಯಾದ್ಯಂತ ಸುಗಮವಾಗಿ ಪ್ರಗತಿಯಲ್ಲಿದೆ ಎಂದು ತಿಳಿಸಿದ್ದಾರೆ. ಗ್ರಾಹಕರು ಅನಗತ್ಯ ಆತಂಕದಿಂದ ಮುಂಚಿತವಾಗಿಯೇ ಅತಿಯಾಗಿ ಖರೀದಿಸದಂತೆ ಅವರು ಮನವಿ ಮಾಡಿದ್ದಾರೆ.

---

ಮಲೆ ಮಹದೇಶ್ವರ ಬೆಟ್ಟದ ಇಂಡಿಗನತ್ತ ಬಳಿ ಚಿರತೆ ದಾಳಿಯಿಂದ ಬಾಲಕ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪಲೋಕಾಯುಕ್ತ ಕೆ.ಎನ್.ಫಣೀಂದ್ರ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿದ್ದಾರೆ.

ಈ ಸಂಬಂಧ ಕಾವೇರಿ ವನ್ಯಜೀವಿಧಾಮ ಹಾಗೂ ಮಹದೇಶ್ವರ ವನ್ಯಧಾಮ ವ್ಯಾಪ್ತಿಯ ನಾಲ್ವರು ಅರಣ್ಯಾಧಿಕಾರಿಗಳಿಗೆ ನೋಟೀಸ್ ಜಾರಿಗೊಳಿಸಲಾಗಿದೆ.

ಮಾಧ್ಯಮ ವರದಿಗಳನ್ನು ಉಲ್ಲೇಖಿಸಿ ಅರಣ್ಯಾಧಿಕಾರಿಗಳಿಗೆ ನೋಟಿಸ್ ನೀಡಲಾಗಿದ್ದು, ಪ್ರಕರಣದ ಮುಂದಿನ ವಿಚಾರಣೆಯನ್ನು ಜೂನ್ ೧೭ ರಂದು ನಿಗದಿಪಡಿಸಿದ್ದಾರೆ.

---

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕಿನ ಹರಳಹಳ್ಳಿ ಗ್ರಾಮದ 'ಪುಸ್ತಕ ಮನೆ'ಯ ರುವಾರಿ ಅಂಕೇಗೌಡ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಅಸಾಧಾರಣ ಸೇವೆಗಾಗಿ ಪ್ರತಿಷ್ಠಿತ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಇದೇ ೨೫ ರಂದು ಪದ್ಮಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪದ್ಮಶ್ರೀ ಪ್ರಶಸ್ತಿ ಪಡೆದ ಅಂಕೇಗೌಡ ಅವರಿಗೆ ಜಿಲ್ಲಾಧಿಕಾರಿ ಡಾ.ಕುಮಾರ ಗೌರವ ಪತ್ರ ಹಸ್ತಾಂತರಿಸಿದರು.

---

'ಗದ್ದೆಯಿಂದ ನ್ಯಾಯದ ಗಡಿಯವರೆಗೆ' ಎಂಬ ಘೋಷವಾಕ್ಯದೊಂದಿಗೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅಖಿಲ ಕರ್ನಾಟಕ ಸರ್ಕಾರಿ ಪರವಾನಗಿ ಭೂಮಾಪಕರ ಸಂಘದ ಆಶ್ರಯದಲ್ಲಿ ದಾವಣಗೆರೆಯಲ್ಲಿಂದು ಪ್ರತಿಭಟನೆ ನಡೆಯಿತು. ಪ್ರತಿಭಟನೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಸುಮಾರು ನಾಲ್ಕು ಸಾವಿರಕ್ಕೂ ಹೆಚ್ಚು ಪರವಾನಗಿ ಭೂಮಾಪಕರು ಭಾಗವಹಿಸಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಪರವಾನಗಿ ಭೂಮಾಪಕರ ಸೇವೆಯನ್ನು ತಕ್ಷಣವೇ ಖಾಯಂಗೊಳಿಸಬೇಕು, ಸಮಾನ ಕೆಲಸಕ್ಕೆ ಸಮಾನ ವೇತನ' ತತ್ವದಡಿ ಗೌರವಧನ ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

---

ಸಂಕ್ಷಿಪ್ತ ಸುದ್ದಿಗಳು

೧. ಆರೋಗ್ಯವಂತ ಮತ್ತು ಸುರಕ್ಷಿತ ಸಮಾಜ ನಿರ್ಮಾಣಕ್ಕಾಗಿ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವಂತೆ ಹಾಸನ ಜಿಲ್ಲಾಧಿಕಾರಿ ಲತಾ ಕುಮಾರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

೨. ಹಾವೇರಿ ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದಾಗಿ ಜಿಲ್ಲೆಯ ೧೨೭ ಮನೆಗಳಿಗೆ ಹಾನಿಯಾಗಿದ್ದು, ೧ ಸಾವಿರ ೨೩೫ ಹೆಕ್ಟೇರ್ ಪ್ರದೇಶದಲ್ಲಿನ ಬೆಳೆಗೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

೩. ದಕ್ಷಿಣ ಕನ್ನಡ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ೬೬ರಲ್ಲಿ ಬರುವ ಎರಡು ಪ್ರಮುಖ ಜಂಕ್ಷನ್‌ನಲ್ಲಿ ವಾಹನಗಳ ಸುಗಮ ಸಂಚಾರಕ್ಕಾಗಿ ಅಂಡರ್‌ಪಾಸ್ ನಿರ್ಮಾಣಕ್ಕೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಒಟ್ಟು ೧೧ ಕೋಟಿ ೬೩ ಲಕ್ಷ ರೂಪಾಯಿ ಅನುದಾನ ಬಿಡುಗಡೆ ಮಾಡಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ.

೪. ಗದಗ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ೩ ಲಕ್ಷ ೧೪ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

೫. ಮಂಡ್ಯ ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮವು ಜೂನ್ ೨೮ ರಂದು ನಡೆಯಲಿದ್ದು, ೫ ವರ್ಷದೊಳಗಿನ ಯಾವುದೇ ಮಗುವು ಲಸಿಕೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೬. ಆಕಾಶವಾಣಿ ಮೈಸೂರು ಕೇಂದ್ರ ಇದೇ ೨೧ ರಂದು ಮಂಡ್ಯದಲ್ಲಿ ಮುಂಗಾರು ಮಳೆ-ಇಳೆ ಕಾವ್ಯಧಾರೆ ಬಾನುಲಿ ಬರವಣಿಗೆ ಕುರಿತ ಕಾರ್ಯಾಗಾರ ಹಮ್ಮಿಕೊಂಡಿದೆ. ಮುಖ್ಯ ಅತಿಥಿಗಳಾಗಿ ಮಂಡ್ಯ ಕರ್ನಾಟಕ ಸಂಘದ ಅಧ್ಯಕ್ಷರಾದ ಪ್ರೊಫೆಸರ್ ಜೈಪ್ರಕಾಶ್ ಗೌಡ ಭಾಗವಹಿಸಲಿದ್ದಾರೆ.

೭. ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದ ವತಿಯಿಂದ ದಾವಣಗೆರೆ ಜಿಲ್ಲೆಯಲ್ಲಿ ಪರಿಶಿ? ಪಂಗಡದವರು ವಾಸಿಸುವ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ 'ಜಾನ್ ಭಾಗೀದಾರಿ - ಸಬ್ಸೇ ದೂರ್, ಸಬ್ಸೇ ಪೆಹ್ಲೇ' ಅಭಿಯಾನದಡಿ ಇಂದಿನಿಂದ ಮಾಹಿತಿ, ಶಿಕ್ಷಣ ಮತ್ತು ಸಂವಹನ ವಿಶೇ? ಜಾಗೃತಿ ಶಿಬಿರ ಹಮ್ಮಿಕೊಂಡಿದೆ.

____________ಮುಕ್ತಾಯ___________